ಮೈಸೂರು ಡಿಸ್ಟ್ರಿಕ್ಟು.

ಮೈಸೂರು ಡಿಸ್ಟ್ರಿಕ್ಟು ಜಡ್ಜ್ರೀಯವರ ಕೋರ್ಟಿನಲ್ಲಿ.

1889ನೇ ಇಸವಿ ಅರ್ಜೀ ನಂಬರ್ 293.

ಮೃತಪಟ್ಟ ಸಿದ್ದಲಿಂಗಪ್ಪನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರು ಮಹದೇವಪ್ಪ, ರಾಜಕೂಟ ಚನ್ನವೀರಪ್ಪ, ವೀರಭದ್ರಪ್ಪ 2—3—4ನೇ ಮೈನರ್ ಗಾರ್ಡಿಯರ್ ಮಹದೇವಪ್ಪನವರು ಮೃತಪಟ್ಟ ಸದರೀ ಸಿದ್ದಲಿಂಗಪ್ಪನವರಿಗೆ ಮಕ್ಕಳು ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಸ್ಥಳದ ಸದರೀ ಮಹದೇವಪ್ಪನವರು ಸದರೀ ವಾಸಸ್ಥರಾಗಿ ಮೃತಪಟ್ಟ ಸಿದ್ದಲಿಂಗಪ್ಪನವರ ಜಿಂದಗಿ ಬಗ್ಯಾಗಿ ಬರತಕ್ಕ 180 ರೂಪಾಯಿ ಸಾಲಗಳನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಮಾದೇವಪ್ಪನವರ ಅರ್ಜಿಯನ್ನು 1890ನೇ ಇಸವಿ ಜನವರಿ ತಿಂಗಳು ತಾರೀಖು 6ರಲ್ಲು ಕೇಳಿ ಸರ್ಟಿಫಿಕೇಟಿ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಸಿಮೃತಪಟ್ಟ ಸಿದ್ದಲಿಂಗಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1889ನೇ ಇಸವಿ ಡಿಸಂಬರ್ ತಿಂಗಳು 2ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

ಎಸ್. ಹೇವಾಜಿರಾವ್,
ಡಿಸ್ಟ್ರಿಕ್ಟು ಜಡ್ಜ್.

ನಗರ ಡಿವಿಜ್ಞ ಡಿಸ್ಟ್ರಿಕ್ಟು ಜಡ್ಜ್ರವರ ಕೋರ್ಟಿನಲ್ಲಿ.

1889ನೇ ಇಸವಿ ಅರ್ಜೀ ನಂಬರ್ 97.

ಮೃತಪಟ್ಟ ಶ್ಯಾಮಾಶಾಸ್ತ್ರಿಯಂಬವನ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಜಾನಕೀ ರಾಮಯ್ಯನು ಮೃತಪಟ್ಟ ಸದರೀ ಶ್ಯಾಮಾಶಾಸ್ತ್ರಿಯಂಬವನಿಗೆ ಮಗನು ಆಗಬೇಕೆಂಬ ಹಕ್ಕುದಾರೀ ಮೇಲೆ ಕಡೂರು ಡಿಸ್ಟ್ರಿಕ್ಟು ಚಿಕ್ಕಮುಗಳೂರ್ ಸ್ಥಳದ ಜಾನಕೀ ರಾಮಯ್ಯನು ಕಡೂರು ಡಿಸ್ಟ್ರಿಕ್ಟು ಚಿಕ್ಕಮುಗಳೂರು ವಾಸಸ್ಥನಾಗಿ ಮೃತಪಟ್ಟ ಶ್ಯಾಮಾಶಾಸ್ತ್ರಿಯಂಬವನ ಜಿಂದಗಿ ಬಗ್ಯಾಗಿ ಬರತಕ್ಕ ರೂ. 1021—5—3 ಸಾಲಗಳನ್ನು ವಸೂಲ್ ಮಾಡುವದಕ್ಕೆ 1860ನೆ ಇಸವಿ 27ನೇ ಆಕ್ಟುಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಜಾನಕೀ ರಾಮಯ್ಯನ ಅರ್ಜಿಯನ್ನು 1889ನೇ ಇಸವಿ ಡಿಸಂಬರ್ ತಿಂಗಳು ತಾರೀಖು 21ರಲ್ಲು ಕೇಳಿ ಸರಟಿಫಿಕೇಟಿ ಪಡೆಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಶ್ಯಾಮಾಶಾಸ್ತ್ರಿಯಂಬವನ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1889ನೇ ಇಸವಿ ಅರ್ಜೀ ನಂಬರ್ 98.

ಮೃತಪಟ್ಟ ನಾರಣಯ್ಯನ ಆಸ್ತೀವಿಷಯದಲ್ಲಿ—

ಅರ್ಜೀದಾರ್ ವೆಂಕಟದಾಸಪ್ಪ ಮೈನರ್‌ಗಾರ್ಡಿಯರ್ ನಾಗಪ್ಪ, ಮೃತಪಟ್ಟ ಸದರೀ ನಾರಣಯ್ಯನಿಗೆ ಸದರೀ ಮೈನರನು ದತ್ತು ಮಗನು ಆಗಬೇಕೆಂಬ ಹಕ್ಕುದಾರೀ ಮೇಲೆ ಕಡೂರು ಡಿಸ್ಟ್ರಿಕ್ಟು ಮೂಡಗೆರೆ ತಾಲ್ಲೂಕು ಕಳಸದ ಮಾಗಣಿ ಕಸಬಾ ಗ್ರಾಮಕ್ಕೆ ಕೀರಿದ ಮೇಲ್‌ಅಂಗಡಿ ಸ್ಥಳದ ಮೈನರ್ ಗಾರ್ಡಿಯರ್‌ನಾಗಪ್ಪನು ಮೂಡಗೆರೆ ತಾಲ್ಲೂಕು ಮೇಲ್‌ಅಂಗಡಿ ವಾಸಸ್ಥನಾಗಿ ಮೃತಪಟ್ಟ ನಾರಣಯ್ಯನಜಿಂದಗಿ ಬಗ್ಯಾಗಿ ಬರತಕ್ಕ 1,000 ರೂ. ಸಾಲಗಳನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟಿ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಮೈನರ್‌ಗಾರ್ಡಿಯರ್ ನಾಗಪ್ಪನ ಅರ್ಜಿಯನ್ನು 1889ನೇ ಇಸವಿ ಡಿಸಂಬರ್ ತಿಂಗಳು ತಾರೀಖು 21ರಲ್ಲು ಕೇಳಿ ಸರಟಿಫಿಕೇಟಿ ಪಡೆಯತಕ್ಕ ಬಾಧ್ಯತೆ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನಾರಣಯ್ಯನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1889ನೇ ಇಸವಿ ಅರ್ಜೀ ನಂಬರ್ 99.

ಮೃತಪಟ್ಟ ಕೃಷ್ಣಪ್ಪಯ್ಯನ ಆಸ್ತೀ ವಿಷಯದಲ್ಲಿ—

ಅರ್ಜೀದಾರ ವೆಂಕಟದಾಸಪ್ಪ ಮೈನರ್ ಗಾರ್ಡಿಯರ್ ನಾಗಪ್ಪ, ಮೃತಪಟ್ಟ ಸದರೀ ಕೃಷ್ಣಪ್ಪಯ್ಯನಿಗೆ ಸದರೀ ಮೈನರನು ಅವರ ಸುಪುತ್ರನು ಆಗಬೇಕೆಂಬ ಹಕ್ಕುದಾರೀ ಮೇಲೆ ಕಡೂರು ಡಿಸ್ಟ್ರಿಕ್ಟು ಮೂಡಿಗೆರೆ ತಾಲ್ಲೂಕು ಕಳಸದ ಮಾಗಣಿ ಮೇಲ್‌ಅಂಗಡಿ ಸ್ಥಳದ